# 7ನೇ ರಾಜ್ಯ ವೇತನ ಆಯೋಗದ ಪರಿಶೀಲನಾರ್ಹ ಅಂಶಗಳು.

---

1) ರಾಜ್ಯ ಸರ್ಕಾರಿ ನೌಕರರ (ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿ ಹೊಂದಿರುವವರನ್ನು ಹೊರತುಪಡಿಸಿ) ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಮತ್ತು ಕಾಲೇಜುಗಳ ಬೋಧಕೇತರ ಸಿಬ್ಬಂದಿಗಳಿಗೆ ಮರಣ ಹಾಗೂ ನಿವೃತ್ತಿ ಉಪದಾನ ಸೌಲಭ್ಯಗಳನ್ನೊಳಗೊಂಡಂತೆ ಲಭ್ಯವಿರುವ ಎಲ್ಲಾ ಕ್ರೋಢೀಕೃತ ಸೌಲಭ್ಯಗಳನ್ನು ಗಣನೆಗೆ ತೆಗೆದುಕೊಂಡು ಈ ಸಿಬ್ಬಂದಿಗಳ ಪ್ರಸ್ತುತ ವೇತನ ರಚನೆಯನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ನೂತನ ವೇತನ ರಚನೆಯನ್ನು ರೂಪಿಸುವುದು.
2) ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ವೃಂದದ ಹುದ್ದೆಗಳನ್ನು ಸಮೀಕರಿಸಿ ಕೇಂದ್ರ ಸರ್ಕಾರದ ವೇತನ ರಚನೆಯನ್ನು ಅಳವಡಿಸಿಕೊಳ್ಳುವ ಕಾರ್ಯಸಾಧ್ಯತೆಗಳನ್ನು ಪರಿಶೀಲಿಸುವುದು.
3) ರಾಜ್ಯ ಸರ್ಕಾರವು ಅಳವಡಿಸಿಕೊಳ್ಳಬಹುದಾದ ತುಟ್ಟಿ ಭತ್ಯೆಯ ಸೂತ್ರವನ್ನು ನಿರ್ಧರಿಸಿ ಪರಿಶೀಲಿಸುವುದು.
4) ಮನೆ ಬಾಡಿಗೆ ಭತ್ಯೆ ಮತ್ತು ನಗರ ಪರಿಹಾರ ಭತ್ಯೆ ವಿಶೇಷ ಭತ್ಯೆಗಳು ಇತ್ಯಾದಿ ಮತ್ತು ರಜೆ ಪ್ರಯಾಣ ರಿಯಾಯಿತಿ ಮತ್ತು ವೈದ್ಯಕೀಯ ಮರುಪಾವತಿ ಸೌಲಭ್ಯಗಳನ್ನೊಳಗೊಂಡಂತೆ ವಿವಿಧ ಭತ್ಯೆಗಳ ಪ್ರಮಾಣವನ್ನು ಪರಿಶೀಲಿಸುವುದು ಹಾಗೂ ಅಪೇಕ್ಷಣೀಯವಾದ ಹಾಗೂ ಕಾರ್ಯಸಾಧ್ಯವಿರುವ ಬದಲಾವಣೆಗಳನ್ನು ಸಲಹೆ ಮಾಡುವುದು.
5) ನಿವೃತ್ತಿ ವೇತನ ಮತ್ತು ನಿವೃತ್ತಿ ಸೌಲಭ್ಯಗಳನ್ನು ಪರಿಶೀಲಿಸುವುದು.
6) ರಾಜ್ಯ ಸರ್ಕಾರದಿಂದ ವಹಿಸಲ್ಪಡುವ/ಸೂಚಿಸಬಹುದಾದ ಇತರೆ ವಿಷಯಗಳನ್ನು ಪರಿಶೀಲಿಸುವುದು.

ಆಯೋಗವು ತನ್ನ ಶಿಫಾರಸ್ಸುಗಳನ್ನು ಮಾಡುವಲ್ಲಿ, ರಾಜ್ಯ ಸಂಪನ್ಮೂಲಗಳು ಹಾಗೂ ವಿವಿಧ ಅಭಿವೃದ್ದಿ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತಾಗಿ ರಾಜ್ಯ ಸರ್ಕಾರದ ಹೊಣೆಗಳು, ಶಾಸನಬದ್ದ ಹಾಗೂ ಕ್ರಮಬದ್ದ ಕಾರ್ಯಗಳು, ಋಣಸೇವಾ ನಿರ್ವಹಣೆಗಳು ಮತ್ತು ಇತರೆ ಅಭಿವೃದ್ದಿಯೇತರ ಅಗತ್ಯಗಳನ್ನು ಹಾಗೂ ವಿತ್ತೀಯ ಹೊಣೆಗಾರಿಕೆ ನಿರ್ವಹಣೆ ಅಧಿನಿಯಮ, 2002 ರ ಅಧ್ಯಾದೇಶದ ಅವಕಾಶಗಳ ಪರಿಮಿತಿಯನ್ನು ಗಮನದಲ್ಲಿರಿಸಿಕೊಳ್ಳುವುದು.